# ನರಕ ಚತುರ್ದಶಿ – ಆಶ್ವೀಜ ಬಹುಳ ಚತುರ್ದಶಿ –

**ತೈಲಾಭ್ಯಂಜನ ಕಡ್ಡಾಯ** – ನರಕ ಚತುರ್ದಶಿಯಂದು ಪ್ರತಿಯೊಬ್ಬ ಜೀವಿಯೂ ಅಭ್ಯಂಜನವನ್ನು ಮಾಡಲೇಬೇಕು. ಇಲ್ಲದಿದ್ದರೆ ದಾರಿದ್ರ್ಯಾದಿಗಳಿಂದ ಪೀಡಿತರಾಗುವರು.

ಈ ದಿನ ಗಂಗೆಯು ಜಲದಲ್ಲಿ ಮತ್ತು ತೈಲದಲ್ಲಿ ಲಕ್ಷ್ಮೀದೇವಿಯು ವಿಶೇಷವಾಗಿ ಸನ್ನಿಹಿತಳಾಗಿರುತ್ತಾರೆ.

ಸಾಮಾನ್ಯವಾಗಿ ತಂದೆ ತಾಯಿಗಳ ಶ್ರಾದ್ಧ ದಿನಗಳಲ್ಲಿ, ವ್ಯತೀಪಾತ, ವೈಧೃತಿ ಯೋಗಗಳಲ್ಲಿ ಅಭ್ಯಂಜನವನ್ನು ಮಾಡಿಕೊಳ್ಳುವ ಸಂಪ್ರದಾಯವಿಲ್ಲ. ವಿಧವೆಯರೂ, ಸನ್ಯಾಸಿಗಳೂ ಅಭ್ಯಂಜನವನ್ನು ಮಾಡಿಕೊಳ್ಳಬಾರದು ಸಾಮಾನ್ಯವಾಗಿ. ಆದರೆ ನರಕ ಚತುರ್ದಶಿಯಂದು ಇದೆಲ್ಲ ಇದ್ದರೂ ಕೂಡ ಅಭ್ಯಂಜನವನ್ನು ಮಾಡಲೇಬೇಕು. ಸನ್ಯಾಸಿಗಳೂ, ವಿಧವೆಯರೂ ಅಭ್ಯಂಜನವನ್ನು ಮಾಡಿಕೊಳ್ಳಲೇಬೇಕು.

**ಏಕೆ ಅಭ್ಯಂಜನವನ್ನು ಮಾಡಿಕೊಳ್ಳಬೇಕು** – ಈ ದಿನ ಶ್ರೀ ಕೃಷ್ಣನು ನರಕಾಸುರನನ್ನು ಸಂಹರಿಸಿದಾಗ ನರಕಾಸುರನು ಒಂದು ವರವನ್ನು ಕೇಳುತ್ತಾನೆ. "ನನ್ನ ಸಂಹಾರದ ನೆನಪಿಗಾಗಿ ಎಲ್ಲರೂ ಅಭ್ಯಂಜನವನ್ನು ಮಾಡಬೇಕು ಮತ್ತು ದೀಪಪ್ರಜ್ವಲನವನ್ನು ಮಾಡಬೇಕು" ಎಂದು ಕೇಳಿದುದರಿಂದ ಕೃಷ್ಣನು ಹಾಗೆಯೇ ಆಗಲಿ ಎಂದು ಅನುಗ್ರಹಿಸಿದ್ದನು. ಅದರ ನಿಮಿತ್ತ ಎಲ್ಲರೂ ಅಭ್ಯಂಜನವನ್ನು ಮಾಡಿಕೊಳ್ಳಬೇಕು. ಶ್ರೀಕೃಷ್ಣನು ನರಕಾಸುರನನ್ನು ಸಂಹರಿಸಿದಾಗ ಅವನ ಮೇಲೆ ರಕ್ತದ ಕಲೆಗಳು ಸಿಡಿದಿದ್ದವು.

ಅದನ್ನು ತೊಳೆದುಕೊಳ್ಳಲೆಂಬಂತೆ ಶ್ರೀಕೃಷ್ಣನೂ ಸಹ ಎಣ್ಣೆ-ನೀರನ್ನು ಹಾಕಿಕೊಂಡಿದ್ದನು.

**ಅಭ್ಯಂಜನ ವಿಧಿ** - ಈದಿನ ಪ್ರಾತ: ಕಾಲ ಶುಚಿರ್ಭೂತನಾಗಿ ಬಿಸಿನೀರು, ಎಳ್ಳೆಣ್ಣೆ, ಸೀಗೆಪುಡಿ, ಗರಿಕೆ ಮುಂತಾದುವನ್ನು ದೇವರ ಮುಂದಿಟ್ಟು

"ತೈಲೇ ಲಕ್ಷ್ಮೀ: ಜಲೇ ಗಂಗಾ ದೀಪಾವಲ್ಯಾಂ ಚತುರ್ದಶೀ ।
ಪ್ರಾತ: ಸ್ನಾನಂ ತು ಯ: ಕುರ್ಯಾತ್ ಯಮಲೋಕಂ ನ ಪಶ್ಯತಿ।
ಎಂಬಂತೆ ಲಕ್ಷ್ಮಿಯು ಶ್ರೀಮನ್ನಾರಾಯಣನಿಗೆ ಅಭ್ಯಂಜನ ಸ್ನಾನ ಮಾಡಿಸುವಳೆಂದು ಭಾವಿಸಿ, ನಾರಾಯಣನಿಗೆ ಸಮರ್ಪಿಸಿ, ಲಕ್ಷ್ಮಿ ಹಾಗೂ ಸಕಲ ದೇವತೆಗಳಿಗೂ, ಗುರುಹಿರಿಯರಿಗೂ ಸಮರ್ಪಿಸಿ, ನಮಸ್ಕರಿಸಿ, ಅವರಿಂದ ಆಶೀರ್ವಾದ ಪಡೆದು, ಮನೆಯ ಹಿರಿಯ ಸುಮಂಗಲೀ ಸ್ತ್ರೀಯರಿಂದಾಗಲೀ, ಅಥವಾ ನೆರೆಹೊರೆಯ ಬಂಧುಗಳಿಂದಾಗಲೀ, ಅಥವಾ ಯಾರೂ ಇಲ್ಲದಿದ್ದರೆ ತನ್ನ ಹೆಂಡತಿಯಿಂದಾಗಲೀ ಎಣ್ಣೆ ಶಾಸ್ತ್ರವನ್ನು ಮಾಡಿಸಿಕೊಂಡು ಗರಿಕೆಗಳಿಂದ :
ಅಶ್ವತ್ಥಾಮಾ ಬಲಿರ್ವ್ಯಾಸೋ ಹನೂಮಾಂಶ್ಚ ವಿಭೀಷಣ: ।
ಕೃಪ: ಪರಶುರಾಮಶ್ಚ ಸಪ್ತೈತೇ ಚಿರಂಜೀವಿನ: ॥
ಎಂದು ಏಳು ಸಲ ಭೂಮಿಗೆ ಮುಟ್ಟಿಸಿ, ಮೂರು ಸಲ ತಲೆಗೂ, ಭೂಮಿಗೂ ಎಣ್ಣೆಯನ್ನು ತಗುಲಿಸಿ, ಅರಿಶಿನ ಕುಂಕುಮಗಳಿಂದ ಪೂಜಿಸಿ ಅಭ್ಯಂಜನ ಸ್ನಾನ ಮಾಡಬೇಕು.

**Collection by Narahari Sumadhwa (9916904341)**

**For www.sumadhwaseva.com**